**All India Radio: Bangalore**
**National Bulletin In Kannada**
**29.04.2026 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**29.04.2026 1.10 p.m.**
**<><><><>**

ಮುಖ್ಯಾಂಶಗಳು

1. ಪಶ್ಚಿಮ ಬಂಗಾಳದ ಎರಡನೇ ಹಂತದ ಚುನಾವಣೆಯ ಮತದಾನ ಪ್ರಗತಿಯಲ್ಲಿ; ಈ ವರೆಗೆ ಶೇಕಡ ೪೦ರಷ್ಟು ಮತದಾನ
2. ಉತ್ತರ ಪ್ರದೇಶದ ಹರ್ದೋಯಿನಲ್ಲಿ ಗಂಗಾ ಎಕ್ಸ್‌ಪ್ರೆಸ್‌ವೇ ಲೋಕಾರ್ಪಣೆಗೊಳಿಸಿದ ಪ್ರಧಾನಿ ನರೇಂದ್ರ ಮೋದಿ
3. ನಗರ ಸಹಕಾರಿ ಬ್ಯಾಂಕಿಂಗ್ ವಲಯದ ಸಾಮರ್ಥ್ಯ ವೃದ್ಧಿಗೆ ಭಾರತೀಯ ರಿಸರ್ವ್ ಬ್ಯಾಂಕ್‌ನಿಂದ ಮಿಷನ್ ಸಕ್ಷಮ್ ಆರಂಭ
4. ೧೯೮೯ರ ಕೇಂದ್ರ ಮೋಟಾರು ವಾಹನ ನಿಯಮಗಳಿಗೆ ಪ್ರಸ್ತಾವಿತ ತಿದ್ದುಪಡಿ ಕರಡು ಅಧಿಸೂಚನೆ ಹೊರಡಿಸಿದ ಕೇಂದ್ರ ಸರ್ಕಾರ
5. ಐಪಿಎಲ್ ಟಿ-೨೦ ಕ್ರಿಕೆಟ್; ವಾಂಖೆಡೆಯಲ್ಲಿಂದು ಮುಂಬೈ ಇಂಡಿಯನ್ಸ್ - ಸನ್‌ರೈಸರ್ಸ್ ಹೈದರಾಬಾದ್ ಮುಖಾಮುಖಿ

<><><><>

ಪಶ್ಚಿಮ ಬಂಗಾಳದಲ್ಲಿ ಇಂದು ಎರಡನೇ ಹಾಗೂ ಅಂತಿಮ ಹಂತದ ವಿಧಾನಸಭಾ ಚುನಾವಣೆಗೆ ಮತದಾನ ಪ್ರಗತಿಯಲ್ಲಿದೆ. ಈವರೆಗೆ ಶೇಕಡ ೪೦ರಷ್ಟು ಮತದಾನ ವಾಗಿರುವ ಬಗ್ಗೆ ಆಯೋಗ ಮಾಹಿತಿ ನೀಡಿದೆ  ಎರಡನೇ ಹಂತದಲ್ಲಿ ಕೋಲ್ಕತ್ತಾ ಉತ್ತರ, ಕೋಲ್ಕತ್ತಾ ದಕ್ಷಿಣ, ಹೌರಾ, ನಾಡಿಯಾ, ಉತ್ತರದ ೨೪ ಪರಗಣಗಳು, ದಕ್ಷಿಣದ ೨೪ ಪರಗಣಗಳು, ಹೂಗ್ಲಿ ಮತ್ತು ಪುರ್ಬಾ ಬರ್ಧಮಾನ್ ಸೇರಿದಂತೆ ಎಂಟು ಜಿಲ್ಲೆಗಳಲ್ಲಿ ಮತದಾನ ನಡೆಯುತ್ತಿದೆ. ೧೪೨ ವಿಧಾನಸಭಾ ಸ್ಥಾನಗಳಿಗೆ ಒಟ್ಟು ಒಂದು ಸಾವಿರದ ೪೪೮ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ೩ ಕೋಟಿ ೨೨ ಲಕ್ಷಕ್ಕೂ ಹೆಚ್ಚು ಮತದಾರರು ತಮ್ಮ ಮತದಾನದ ಹಕ್ಕು ಚಲಾಯಿಸಲು ಅರ್ಹರಾಗಿದ್ದಾರೆ.

ಕೇರಳ, ಅಸ್ಸಾಂ, ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಕೇಂದ್ರಾಡಳಿತ ಪ್ರದೇಶ ಪುದುಚೇರಿ ಸೇರಿದಂತೆ ನಾಲ್ಕು ರಾಜ್ಯಗಳ ಮತ ಎಣಿಕೆ ಮೇ ೪ ರಂದು ನಡೆಯಲಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಉತ್ತರ ಪ್ರದೇಶದ ಹರ್ದೋಇಯಿನಲ್ಲಿಂದು ಗಂಗಾ ಎಕ್ಸ್‌ಪ್ರೆಸ್‌ವೇಯನ್ನು ಲೋಕಾರ್ಪಣೆಗೊಳಿಸಿದರು. ಈ ವೇಳೆ ಮಾತನಾಡಿದ ಅವರು, ಈ ಪರಿವರ್ತನಾತ್ಮಕ ಮೂಲಸೌಕರ್ಯ ಯೋಜನೆಯು ಉತ್ತರ ಪ್ರದೇಶದಾದ್ಯಂತ ಸಂಪರ್ಕವನ್ನು ಹೆಚ್ಚಿಸಲಿದೆ ಹಾಗೂ ಉತ್ತರ ಪ್ರದೇಶದ ಪ್ರಗತಿಯ ವೇಗಕ್ಕೆ ಮತ್ತಷ್ಟು ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೨೮ ಸೆಕೆಂಡ್‌ಗಳು)

ಗಂಗಾ ಎಕ್ಸ್‌ಪ್ರೆಸ್‌ವೇ ೫೯೪ ಕಿಲೋಮೀಟರ್ ಉದ್ದದ, ೬-ಲೇನ್‌ಗಳ, ಪ್ರವೇಶ-ನಿಯಂತ್ರಿತ ಗ್ರೀನ್‌ಫೀಲ್ಡ್ ಹೈ-ಸ್ಪೀಡ್ ಕಾರಿಡಾರ್ ಆಗಿದೆ. ಇದನ್ನು ಸುಮಾರು ೩೬ ಸಾವಿರದ ೨೩೦ ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ನಿರ್ಮಿಸಲಾಗಿದೆ. ಉತ್ತರ ಪ್ರದೇಶ ಎಕ್ಸ್‌ಪ್ರೆಸ್‌ವೇಸ್ ಕೈಗಾರಿಕಾ ಅಭಿವೃದ್ಧಿ ಪ್ರಾಧಿಕಾರವು ಅಭಿವೃದ್ಧಿಪಡಿಸಿದ ಗಂಗಾ ಎಕ್ಸ್‌ಪ್ರೆಸ್‌ವೇ ಉತ್ತರ ಪ್ರದೇಶದ ಪಶ್ಚಿಮ, ಮಧ್ಯ ಮತ್ತು ಪೂರ್ವ ಪ್ರದೇಶಗಳನ್ನು ಒಂದೇ ಹೈ-ಸ್ಪೀಡ್ ಕಾರಿಡಾರ್ ಮೂಲಕ ಸಂಪರ್ಕಿಸುತ್ತದೆ. ಈ ಎಕ್ಸ್‌ಪ್ರೆಸ್‌ವೇ ಶಹಜಹಾನ್‌ಪುರದಲ್ಲಿ ೩.೫ ಕಿಮೀ ಉದ್ದದ ವಾಯುನೆಲೆಯನ್ನು ಹೊಂದಿದ್ದು, ಭಾರತೀಯ ವಾಯುಪಡೆಯ ವಿಮಾನಗಳ ತುರ್ತು ಟೇಕ್‌ಆಫ್ ಮತ್ತು ಲ್ಯಾಂಡಿಂಗ್‌ಗೆ ಸಹಾಯ ಮಾಡಲಿದೆ. ಇದಕ್ಕೂ ಮೊದಲು ಪ್ರಧಾನಿ ನರೇಂದ್ರ ಮೋದಿ ಅವರು ಕಾಶಿಗೆ ತೆರಳಿ, ವಿಶ್ವನಾಥನ ದರ್ಶನ ಪಡೆದರು.

<><><><>

ನಗರ ಸಹಕಾರಿ ಬ್ಯಾಂಕಿಂಗ್ ವಲಯದ ಸಾಮರ್ಥ್ಯ ವೃದ್ಧಿಗಾಗಿ ಭಾರತೀಯ ರಿಸರ್ವ್ ಬ್ಯಾಂಕ್ ಮಿಷನ್ ಸಕ್ಷಮ್ ಅನ್ನು ಪ್ರಾರಂಭಿಸಿದೆ. ಇದು ವ್ಯವಸ್ಥಾಪಕ ಮತ್ತು ಕಾರ್ಯಾಚರಣೆಯ ಸಾಮರ್ಥ್ಯಗಳನ್ನು ಹೆಚ್ಚಿಸುವುದು, ಅನುಸರಣೆ ಸಂಸ್ಕೃತಿಯನ್ನು ಸುಧಾರಿಸುವುದು ಮತ್ತು ಯುಸಿಬಿಗಳಲ್ಲಿ ಸಾಂಸ್ಥಿಕ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ. ಮಿಷನ್ ಸಕ್ಷಮ್ ಯುಸಿಬಿಗಳಿಗೆ ಮಿಷನ್-ಮೋಡ್, ವಲಯ-ವ್ಯಾಪಿ ಮತ್ತು ಅಖಿಲ ಭಾರತ ಸಾಮರ್ಥ್ಯ-ನಿರ್ಮಾಣ ತರಬೇತಿ ಉಪಕ್ರಮವಾಗಿದ್ದು, ಇದರ ಅಡಿಯಲ್ಲಿ ಭಾರತೀಯ ರಿಸರ್ವ್ ಬ್ಯಾಂಕ್

ವೈಯಕ್ತಿಕವಾಗಿ ಮತ್ತು ಇ-ಕಲಿಕಾ ಕೋರ್ಸ್‌ಗಳ ಮೂಲಕ ಹೆಚ್ಚಿನ ಸಂಖ್ಯೆಯ ತರಬೇತಿ ಕಾರ್ಯಕ್ರಮಗಳನ್ನು ನಡೆಸಲಿದೆ. ಇದು ಸುಮಾರು ೧ ಕೋಟಿ ೪೦ ಲಕ್ಷ ಚಂದಾದಾರರನ್ನು ಒಳಗೊಂಡಿದೆ. ಮಿಷನ್ ಸಕ್ಷಮ್ ವ್ಯವಸ್ಥಿತ ಸ್ಥಿರತೆ ಮತ್ತು ಯುಸಿಬಿ ವಲಯದ ಆರೋಗ್ಯಕರ ಬೆಳವಣಿಗೆ ಮತ್ತು ಅಭಿವೃದ್ಧಿಗಾಗಿ ಸುಸ್ಥಿರ, ಸ್ವಯಂ-ಬಲಪಡಿಸುವ ಪರಿಸರ ವ್ಯವಸ್ಥೆಯನ್ನು ಸ್ಥಾಪಿಸುವ ಗುರಿ ಹೊಂದಿದೆ.

<><><>

ಕೇಂದ್ರ ಸರ್ಕಾರ ೧೯೮೯ರ ಕೇಂದ್ರ ಮೋಟಾರು ವಾಹನ ನಿಯಮಗಳಿಗೆ ಪ್ರಸ್ತಾವಿತ ತಿದ್ದುಪಡಿಗಳನ್ನು ವಿವರಿಸುವ ಕರಡು ಅಧಿಸೂಚನೆ ಹೊರಡಿಸಿದೆ. ಅಧಿಸೂಚನೆಯ ಪ್ರಕಾರ, ಎಥೆನಾಲ್ ಮತ್ತು ಜೈವಿಕ ಇಂಧನ ಮಿಶ್ರಣ ಗುರಿಗಳನ್ನು ಪ್ರತಿಬಿಂಬಿಸಲು ಹೊರಸೂಸುವಿಕೆ ಮತ್ತು ಅನುಮೋದನೆ ಮಾನದಂಡಗಳ ಅಡಿಯಲ್ಲಿ ತಾಂತ್ರಿಕ ಇಂಧನ ವರ್ಗೀಕರಣಗಳನ್ನು ನವೀಕರಿಸಲಿದೆ. ಕರಡು ಅಧಿಸೂಚನೆಯಲ್ಲಿನ ಪ್ರಮುಖ ಬದಲಾವಣೆಗಳಲ್ಲಿ ಹೈಡ್ರೋಜನ್ ಇಂಧನ ವರ್ಗೀಕರಣವನ್ನು ಹೈಡ್ರೋಜನ್ + ಸಿಎನ್ ನಿಂದ ಹೈಡ್ರೋಜನ್ + ಸಿಎನ್‌ಜಿಗೆ ಪರಿಷ್ಕರಿಸಲಾಗಿದೆ. ಆಯ್ದ ವರ್ಗದಲ್ಲಿ ಒಟ್ಟು ವಾಹನ ತೂಕದ ಮಿತಿಯನ್ನು ೩ ಸಾವಿರ ಕೆಜಿಯಿಂದ ೩ ಸಾವಿರ ೫೦೦ ಕೆಜಿಗೆ ಹೆಚ್ಚಿಸಲಾಗಿದೆ. ಬಯೋಡೀಸೆಲ್ ಉಲ್ಲೇಖಗಳನ್ನು ಬಿ-೧೦ ರಿಂದ ಬಿ-೧೦೦ ಕ್ಕೆ ಅಪ್‌ಗ್ರೇಡ್ ಮಾಡಲಾಗಿದೆ. ಹೊರಸೂಸುವಿಕೆ ಪರೀಕ್ಷಾ ನಿಯತಾಂಕಗಳು ಮತ್ತು ತಾಂತ್ರಿಕ ಸಂಕೇತಗಳನ್ನು ಪ್ರಮಾಣೀಕರಿಸಲಾಗಿದೆ.

<><><>

ಈಕ್ವೆಡಾರ್ ವಿದೇಶಾಂಗ ವ್ಯವಹಾರ ಸಚಿವರಾದ ಗೇಬ್ರಿಯೆಲಾ ಸೊಮ್ಮರ್‌ಫೆಲ್ಡ್ ರೊಸೆರೊ ಅವರು ಮೂರು ದಿನಗಳ ಭಾರತ ಭೇಟಿಗಾಗಿ ಇಂದು ನವದೆಹಲಿಗೆ ಆಗಮಿಸಿದ್ದಾರೆ. ಈ ವೇಳೆ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿ ಮಾಡಿರುವ ರೊಸೆರೊ ವ್ಯಾಪಾರ, ಕೃಷಿ ಮತ್ತು ಸಾಮರ್ಥ್ಯವೃದ್ಧಿಯಂತಹ ಪ್ರಮುಖ ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸುವ ಕುರಿತಂತೆ ಚರ್ಚೆ ನಡೆಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಮಾಹಿತಿ ಹಂಚಿಕೊಂಡಿರುವ ಡಾ. ಎಸ್. ಜೈಶಂಕರ್, ಈ ಭೇಟಿಯು ಉಭಯ ರಾಷ್ಟ್ರಗಳ ನಡುವಿನ ಸಂಬಂಧವನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ತಿಳಿಸಿದ್ದಾರೆ. ಭಾರತ ನೇತೃತ್ವದ ಇಸ್ರೋ ಸೌರ ಒಕ್ಕೂಟ ಮತ್ತು

ಅಂತಾರಾಷ್ಟ್ರೀಯ ದೊಡ್ಡ ಬೆಕ್ಕುಗಳ ಒಕ್ಕೂಟಕ್ಕೆ ಸೇರುವ ಈಕ್ವೆಡಾರ್ ನಿರ್ಧಾರವನ್ನು ಅವರು ಸ್ವಾಗತಿಸಿದ್ದಾರೆ

<><><><>

ಭಾರತವು ತನ್ನ ಸಾರ್ವಕಾಲಿಕ ಗರಿಷ್ಠ ವಿದ್ಯುತ್ ಬೇಡಿಕೆಯಾದ ೨೫೮ ಗಿಗಾವ್ಯಾಟ್‌ಗಿಂತ ಹೆಚ್ಚಿನ ಮಟ್ಟವನ್ನು ಯಶಸ್ವಿಯಾಗಿ ಪೂರೈಸಿದೆ. ನೆರೆಯ ರಾಷ್ಟ್ರಗಳಿಗೆ ವಿದ್ಯುತ್ ರಫ್ತುಗಳನ್ನು ಏಕಕಾಲದಲ್ಲಿ ನಿರ್ವಹಿಸುವ ಮೂಲಕ ಬೇಡಿಕೆಯನ್ನು ಪೂರೈಸಲಾಗಿದೆ ಎಂದು ವಿದ್ಯುತ್ ಸಚಿವಾಲಯ ಹೇಳಿದೆ. ಈ ಮೈಲಿಗಲ್ಲು ಮೇ ೨೦೨೪ ರಲ್ಲಿ ದಾಖಲಾದ ಹಿಂದಿನ ಸಾರ್ವಕಾಲಿಕ ಗರಿಷ್ಠ ೨೫೦ ಗಿಗಾವ್ಯಾಟ್‌ಗಳನ್ನು ಮೀರಿದೆ. ಉಷ್ಣ, ಜಲ, ಪರಮಾಣು ಮತ್ತು ನವೀಕರಿಸಬಹುದಾದ ಇಂಧನ ಸೇರಿದಂತೆ ವೈವಿಧ್ಯಮಯ ಉತ್ಪಾದನಾ ಮೂಲಗಳ ಮೂಲಕ ಅಗತ್ಯವನ್ನು ಪೂರೈಸಲಾಗಿದೆ. ಇದು ವಿಶ್ವಾಸಾರ್ಹತೆ ಮತ್ತು ಗ್ರಿಡ್ ಸ್ಥಿರತೆಯನ್ನು ಖಚಿತಪಡಿಸುತ್ತದೆ. ನವೀಕರಿಸಬಹುದಾದ ಶಕ್ತಿ, ವಿಶೇಷವಾಗಿ ಸೌರಶಕ್ತಿ, ಗರಿಷ್ಠ ಪರಿಸ್ಥಿತಿಗಳಲ್ಲಿ ಜಲ ಮತ್ತು ಇತರ ಹೊಂದಿಕೊಳ್ಳುವ ಸಂಪನ್ಮೂಲಗಳಿಂದ ಪೂರಕವಾಗಿದೆ ಎಂದು ಸಚಿವಾಲಯ ಮಾಹಿತಿ ಹಂಚಿಕೊಂಡಿದೆ.

<><><><>

ಫಿಫಾ ಅಧ್ಯಕ್ಷ ಗಿಯಾನಿ ಇನ್ಫಾಂಟಿನೊ ಪ್ರಧಾನಿ ನರೇಂದ್ರ ಮೋದಿ ಅವರ ಕ್ರೀಡೆಯ ಮೇಲಿನ ಉತ್ಸಾಹವನ್ನು ಶ್ಲಾಘಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಗ್ಯಾಂಗ್ಟಾಕ್‌ನಲ್ಲಿ ಮಕ್ಕಳೊಂದಿಗೆ ಫುಟ್ಬಾಲ್ ಆಡುತ್ತಿರುವ ಛಾಯಾಚಿತ್ರವನ್ನು ಹಂಚಿಕೊಂಡಿದ್ದಾರೆ. ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ "ಫುಟ್ಬಾಲ್ ನಿಜವಾಗಿಯೂ ಜಗತ್ತನ್ನು ಒಂದುಗೂಡಿಸುತ್ತದೆ" ಎಂಬ ಶೀರ್ಷಿಕೆಯೊಂದಿಗೆ ಚಿತ್ರವನ್ನು ಹಂಚಿಕೊಂಡಿದ್ದಾರೆ. ಈಗಾಗಲೇ ಉಭಯ ನಾಯಕರು ಹಲವಾರು ಅಂತಾರಾಷ್ಟ್ರೀಯ ವೇದಿಕೆಗಳಲ್ಲಿ  ಭೇಟಿಯಾಗಿದ್ದಾರೆ.

<><><><>

ಮಾದಕ ದ್ರವ್ಯ ನಿಯಂತ್ರಣ ಬ್ಯೂರೋ -ಎನ್‌ಸಿಬಿಯ ೧ನೇ ತ್ರೈಮಾಸಿಕ ವಲಯ ನಿರ್ದೇಶಕರ ಸಮ್ಮೇಳನ ೨೦೨೬ ನವದೆಹಲಿಯಲ್ಲಿ ಮುಕ್ತಾಯಗೊಂಡಿದೆ. ಸಮ್ಮೇಳನದಲ್ಲಿ ಮುಂದಿನ ಮೂರು ವರ್ಷಗಳಲ್ಲಿ ದೇಶಾದ್ಯಂತ ಮಾದಕ ದ್ರವ್ಯ ಕಳ್ಳಸಾಗಣೆ ಮತ್ತು ಮಾದಕ ದ್ರವ್ಯ ದುರುಪಯೋಗವನ್ನು ಪರಿಣಾಮಕಾರಿಯಾಗಿ ಎದುರಿಸಲು ಎನ್‌ಸಿಬಿಯ ಎಲ್ಲಾ ಕ್ಷೇತ್ರ ರಚನೆಗಳು ತಮ್ಮ ಬದ್ಧತೆಯನ್ನು ಪುನರುಚ್ಚರಿಸಿವೆ. ಎರಡು ದಿನಗಳ ಸಮ್ಮೇಳನವು ಪರಿಣಾಮಕಾರಿ ಕಾನೂನು

ಕ್ರಮ ಜರುಗಿಸುವುದು, ಜಂಟಿ ಸಮನ್ವಯ ಸಮಿತಿ ಮತ್ತು ಮಾದಕ ದ್ರವ್ಯ ಸಮನ್ವಯ ಕೇಂದ್ರದ ಕಾರ್ಯವಿಧಾನಗಳ ಅತ್ಯುತ್ತಮ ಬಳಕೆ, ಮಾರ್ಗಸೂಚಿಯ ಅನುಷ್ಠಾನಕ್ಕೆ ಸಜ್ಜಾಗಲು ಎನ್‌ಸಿಬಿ ವಲಯ ಕಚೇರಿಗಳ ಜಾರಿ ಮತ್ತು ಸಮನ್ವಯ ಕಾರ್ಯಗಳ ವಿವರವಾದ ವಿಮರ್ಶೆಯ ಮೇಲೆ ಕೇಂದ್ರೀಕರಿಸಿತ್ತು. ಎನ್‌ಸಿಬಿ ಮಹಾನಿರ್ದೇಶಕ ಅನುರಾಗ್ ಗರ್ಗ್ ಮಾತನಾಡಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಮಾರ್ಗಸೂಚಿಯ ಗುರಿಗಳನ್ನು ಜಾಲ ಕೇಂದ್ರಿತ ವಿಧಾನದ ಮೂಲಕ ಪೂರೈಸಲು ಹಾಗೂ ಮಾಸಿಕ ಮೈಲಿಗಲ್ಲುಗಳನ್ನು ಸಾಧಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

<><><>

ಮೇ ೧ ರಿಂದ ಯುನೈಟೆಡ್ ಅರಬ್ ಎಮಿರೇಟ್ಸ್ ಪೆಟ್ರೋಲಿಯಂ ರಫ್ತು ಮಾಡುವ ದೇಶಗಳ ಸಂಘಟನೆ ಒಪೆಕ್‌ನಿಂದ ಹೊರಬರಲು ನಿರ್ಧರಿಸಿದೆ. ಯುಎಇಯ ಈ ನಿರ್ಧಾರವು ತೈಲ ಉತ್ಪಾದಕ ರಾಷ್ಟ್ರಗಳ ಗುಂಪಿಗೆ ಹೊಡೆತ ನೀಡಿದೆ. ಇರಾನ್ ಯುದ್ಧದಿಂದ ಉಂಟಾದ ಇಂಧನ ಬಿಕ್ಕಟ್ಟು ಗಲ್ಫ್ ರಾಷ್ಟ್ರಗಳ ನಡುವಿನ ಭಿನ್ನಾಭಿಪ್ರಾಯವನ್ನು ಹೆಚ್ಚಿಸಿದೆ. ಒಪೆಕ್ ಗುಂಪಿನ ಅತಿದೊಡ್ಡ ಉತ್ಪಾದಕರಲ್ಲಿ ಒಂದಾದ ಯುಎಇಯ ನಿರ್ಗಮನವು ಜಾಗತಿಕ ತೈಲ ಪೂರೈಕೆಗಳ ಮೇಲಿನ ಒಪೆಕ್ ನಿಯಂತ್ರಣವನ್ನು ದುರ್ಬಲಗೊಳಿಸಿದೆ. ಯುಎಇ ಮತ್ತು ಸೌದಿ ಅರೇಬಿಯಾ ನಡುವಿನ ಬಿರುಕನ್ನು ಮತ್ತಷ್ಟು ಹೆಚ್ಚಿಸಿದೆ.

<><><>

೧೫ನೇ ದೆಹಲಿ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ-೨೦೨೬ ಮುಂದಿನ ತಿಂಗಳು ೪ ರಿಂದ ೮ರ ವರೆಗೆ ದೆಹಲಿಯಲ್ಲಿ ನಡೆಯಲಿದೆ. ಈ ಉತ್ಸವವನ್ನು ಐಜಿಎನ್‌ಸಿಎ ಮತ್ತು ಅಂಬೇಡ್ಕರ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಆಯೋಜಿಸಲು ನಿರ್ಧರಿಸಲಾಗಿದೆ. ಈ ವರ್ಷ, ಚೀನಾ, ರಷ್ಯಾ ಮತ್ತು ಆಫ್ರಿಕಾವನ್ನು ಪ್ರಮುಖ ದೇಶಗಳಾಗಿ ಆಯ್ಕೆ ಮಾಡಲಾಗಿದೆ ಎಂದು ಐಜಿಎನ್‌ಸಿಎ ತಿಳಿಸಿದೆ. ಸಾಂಸ್ಕೃತಿಕ ಮೌಲ್ಯಗಳಲ್ಲಿ ಬೇರೂರಿರುವ ಅರ್ಥಪೂರ್ಣ ಸಿನಿಮಾವನ್ನು ಉತ್ತೇಜಿಸುವ ಹಂಚಿಕೆಯ ಬದ್ಧತೆಯನ್ನು ಪ್ರತಿಬಿಂಬಿಸುವ ಐಜಿಎನ್‌ಸಿಎ ಮತ್ತು ಸಂಸ್ಕೃತಿ ಸಚಿವಾಲಯದ ಬೆಂಬಲದೊಂದಿಗೆ ಈ ಉತ್ಸವವನ್ನು ಆಯೋಜಿಸಲಾಗುತ್ತಿದೆ. ಮುಖ್ಯವಾಹಿನಿಯ ಚಲನಚಿತ್ರಗಳ ಜೊತೆಗೆ, ಪರಂಪರೆ, ಸಂಪ್ರದಾಯಗಳು ಮತ್ತು ಜ್ಞಾನ ವ್ಯವಸ್ಥೆಗಳನ್ನು ದಾಖಲಿಸುವ ಸಾಕ್ಷ್ಯಚಿತ್ರ ಮತ್ತು ಸಾಂಸ್ಕೃತಿಕ ಚಲನಚಿತ್ರಗಳ ಮೇಲೆ ವಿಶೇಷ ಒತ್ತು ನೀಡಲಿದೆ.

<><><><>

ಹಿಮಾಚಲ ಪ್ರದೇಶ, ಪಂಜಾಬ್, ಚಂಡೀಗಢ, ಹರಿಯಾಣ, ದೆಹಲಿ, ಉತ್ತರಾಖಂಡ, ಬಿಹಾರ ಮತ್ತು ಜಾರ್ಖಂಡ್‌ಗಳಲ್ಲಿ ಇಂದು ಗುಡುಗು ಸಹಿತ ಮಳೆಯಾಗುವ ನಿರೀಕ್ಷೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಮುಂದಿನ ಎರಡು ದಿನಗಳವರೆಗೆ ಛತ್ತೀಸ್‌ಗಢ, ಉತ್ತರ ಪ್ರದೇಶ, ಕರ್ನಾಟಕದ ಒಳಭಾಗ, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಕೇರಳ, ಮಾಹೆ, ಮಧ್ಯಪ್ರದೇಶ ಮತ್ತು ವಿದರ್ಭದಲ್ಲಿ ಮಿಂಚು ಮತ್ತು ಬಿರುಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಮುಂದಿನ ಎರಡು ದಿನಗಳವರೆಗೆ ಕರಾವಳಿ ಆಂಧ್ರಪ್ರದೇಶ, ತೆಲಂಗಾಣ, ಕರಾವಳಿ ಕರ್ನಾಟಕ, ರಾಯಲಸೀಮಾ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ನಲ್ಲಿ ಇದೇ ಪರಿಸ್ಥಿತಿ ಮುಂದುವರಿಯುವ ಸಾಧ್ಯತೆಯಿದೆ. ಮುಂದಿನ ಎರಡು ದಿನಗಳವರೆಗೆ ಕರಾವಳಿ ಆಂಧ್ರಪ್ರದೇಶ, ಒಡಿಶಾ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ನಲ್ಲಿ ಬಿಸಿ ಮತ್ತು ಆರ್ದ್ರತೆಯ ವಾತಾವರಣವಿರುತ್ತದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><><>

ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವು ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಸೆಣಸಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>